**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆ**

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು -1**

ಸಂಖ್ಯೆ:-ಸಿ1(4) ಸಾಮಾನ್ಯ ವರ್ಗಾವಣೆ: 30/2015-16

ದಿನಾಂಕ: 25-07-2015

ಬೆಂಗಳೂರು ಮತ್ತು ಮೈಸೂರು ವಿಭಾಗದ
ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ
ಜಿಲ್ಲಾ ಉಪನಿರ್ದೇಶಕರು (ಆಡಳಿತ)

ವಿಷಯ :-2015-16ನೇ ಸಾಲಿನ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಮತ್ತು ತತ್ಸಮಾನ ವೃಂದಬಲ ಮತ್ತು ಖಾಲಿ ಹುದ್ದೆಗಳ ಮಾಹಿತಿಗಳನ್ನು ಆನ್ ಲೈನ್‌ನಲ್ಲಿ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:- ಈ ಕಛೇರಿ ಅಧಿಕೃತ ಜ್ಞಾಪನ ಪತ್ರ ಸಮ ಸಂಖ್ಯೆ ದಿನಾಂಕ 27-06-2015.

-*****-

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007ರಡಿಯಲ್ಲಿ ರೂಪಿಸಲಾಗಿರುವ ನಿಯಮಗಳಂತೆ. ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳ 2015-16ನೇ ಸಾಲಿನ ವರ್ಗಾವಣೆಗೆ ಸಂಬಂಧಿಸಿದಂತೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಮಾರ್ಗ ಸೂಚಿಯನ್ನು ಉಲ್ಲೇಖಿತ ಅಧಿಕೃತ ಜ್ಞಾಪನದಲ್ಲಿ ಹೊರಡಿಸಲಾಗಿದೆ.

ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳ ವರ್ಗಾವಣೆಗೆ ಪೂರ್ಣವಾಗಿ ತಂತ್ರಾಂಶವನ್ನೇ ಅವಲಂಬಿಸಿರುವುದು ತಿಳಿದಿರುವ ವಿಷಯವಾಗಿದೆ. ಆದ್ದರಿಂದ ಕರಾರುವಕ್ಕಾದ ಮಾಹಿತಿ ಅವಶ್ಯಕವಿರುತ್ತದೆ. ನಿಮ್ಮ ಜಿಲ್ಲೆಯಲ್ಲಿ ಪ್ರಸ್ತುತ ದಿನಾಂಕದವರೆಗೆ ಖಾಲಿ ಇರುವ (ಡಯಟ್ ಆಡಳಿತ ವ್ಯಾಪ್ತಿಯ ಉಪನ್ಯಾಸಕರ ಖಾಲಿ ಹುದ್ದೆಗಳನ್ನು ಒಳಗೊಂಡಂತೆ) ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಎಲ್ಲಾ ಖಾಲಿ ಹುದ್ದೆಗಳ ಮಾಹಿತಿಯನ್ನು ತಂತ್ರಾಂಶದಲ್ಲಿ ಭರ್ತಿ ಮಾಡಲು ತಿಳಿಸಿದೆ.

ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯಕ್ರಮದ ಸಹಾಯಕ ಯೋಜನಾ ಸಮನ್ವಯಾಧಿಕಾರಿ ಹುದ್ದೆಗಳನ್ನು ತುಂಬಬಾರದೆಂದು ರಾಜ್ಯ ಯೋಜನಾ ನಿರ್ದೇಶಕರು, ಆರ್.ಎಂ.ಎಸ್.ಎ, ಬೆಂಗಳೂರು ಇವರಿಂದ ನಿರ್ದೇಶನವಿರುವುದರಿಂದ ಆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಬಾರದು.

**ಆನ್ ಲೈನ್‌ನಲ್ಲಿ ಭರ್ತಿ ಮಾಡಿದ ಖಾಲಿ ಹುದ್ದೆಗಳ ಮಾಹಿತಿಯನ್ನು ಪ್ರಿಂಟ್ ತೆಗೆದು ದೃಢೀಕರಿಸಿ, ದಿನಾಂಕ 30-07-2015ರೊಳಗೆ ಈ ಕಛೇರಿಗೆ ತಲುಪುವಂತೆ ಕಳುಹಿಸಲು ಕೋರಿದೆ.**

ತಮ್ಮ ನಂಬುಗೆಯ,

(ಫಿಲೋಮಿನಾ ಲೋಬೋ)
ಜಂಟಿ ನಿರ್ದೇಶಕರು (ಆಡಳಿತ)
(ಹೆಚ್ಚುವರಿ ಪ್ರಭಾರ)

27.7.15